# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ದೂರವಾಣಿ; 0816-225596, 0816-2255597, 0816-2255597 ಫ್ಯಾಕ್ಸ್ ; 0816-2270719

ಸಂಖ್ಯೆ:ತುವಿ:ಶೈವಿ:2021-22 / 817-8 . ದಿನಾಂಕ:13.10.2021

## ಅಧಿಸೂಚನೆ

**ವಿಷಯ : 2021–22ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ ಪದವಿ ಕೋರ್ಸುಗಳಿಗೆ ನಿಗದಿಪಡಿಸಿರುವ ಪ್ರವೇಶ ಶುಲ್ಕದಲ್ಲಿ ಕೋವಿಡ್–19 ಯಿಂದಾಗಿ ನಿಧನ ಹೊಂದಿರುವ ಪೋಷಕರ ಮಕ್ಕಳಿಗೆ ವಿನಾಯಿತಿ ನೀಡುವ ಕುರಿತು.**

ಉಲ್ಲೇಖ : 1) ಅಧಿಸೂಚನೆ ಸಂಖ್ಯೆ:ತುವಿ:ಶೈವಿ:2020–21:948/949 ದಿನಾಂಕ:02.08.2021

2) ದಿನಾಂಕ:22.09.2021 ರಂದು ನಡೆದ ಏಳನೇ ಸಾಮಾನ್ಯ ಸಿಂಡಿಕೇಟ್ ಸಭೆಯ ನಿರ್ಣಯ

3) ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 08.10.2021 (ಪುಟ ಸಂಖ್ಯೆ: 07 ಕಂಡಿಕೆ: 30)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021–22 ನೇ ಶೈಕ್ಷಣಿಕ ಸಾಲಿಗೆ ತುಮಕೂರು ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ವಿವಿಧ ಸ್ನಾತಕ ಪದವಿ ಕೋರ್ಸುಗಳ ಪ್ರವೇಶ ಶುಲ್ಕಗಳನ್ನು ಉಲ್ಲೇಖ (01)ರಲ್ಲಿ ನಿಗಧಿಪಡಿಸಲಾಗಿರುತ್ತದೆ.

ಉಲ್ಲೇಖ(2)ರ ಏಳನೇ ಸಾಮಾನ್ಯ ಸಿಂಡಿಕೇಟ್ ಸಭೆಯಲ್ಲಿ ಕೋವಿಡ್–19ರ ಸಾಂಕ್ರಾಮಿಕ ರೋಗದಿಂದ ನಿಧನ ಹೊಂದಿರುವಂತಹ ಪೋಷಕರ ಮಕ್ಕಳಿಗೆ 2021–22ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರವೇಶಾತಿ ಶುಲ್ಕದಲ್ಲಿ ವಿನಾಯಿತಿ ನೀಡುವಂತೆ ನಿರ್ಣಯಿಸಲಾಗಿರುತ್ತದೆ.

ಈ ಸಂಬಂಧ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಕೋವಿಡ್–19 ಯಿಂದಾಗಿ ನಿಧನ ಹೊಂದಿರುವ ಪೋಷಕರ ಮಕ್ಕಳಿಗೆ ವಿವಿಧ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ನೀಡುವಾಗ ವೈದ್ಯಕೀಯ ದಾಖಲೆಗಳನ್ನು ಪರಿಶೀಲಿಸಿ, ದೃಢಪಡಿಸಿಕೊಂಡು ಪ್ರವೇಶ ಶುಲ್ಕ ವಿನಾಯಿತಿ ನೀಡಿ, ಈ ಕುರಿತು ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಿಳಿಸಿದೆ.

ಕರಡು ಪತ್ರವು ಮಾನ್ಯಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಆದೇಶದ ಮೇರೆಗೆ

Mangalahrani M.

ಉಪಕುಲಸಚಿವರು

ಉಪಕುಲಸಚಿವರು

ಶೈಕ್ಷಣಿಕ ವಿಭಾಗ

ತುಮಕೂರು ವಿಶ್ವವಿದ್ಯಾಲಯ

ತುಮಕೂರು

ಗೆ,

ಪ್ರಾಂಶುಪಾಲರು,
ಎಲ್ಲಾ ಘಟಕ ಮತ್ತು ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.